# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)/ಪಿಆರ್/41/2017-18

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 11/10/17

**ಕಛೇರಿ ಆದೇಶ**

ವಿಷಯ: ಅಧಿಕಾರಿ / ನೌಕರರುಗಳ ಸೇವಾವಹಿಗಳನ್ನು ಗಣಕೀಕರಣಗೊಳಿಸಿ, ಹೆಚ್.ಆರ್.ಎಂ.ಎಸ್. ತಂತ್ರಾಂಶವನ್ನು ಉನ್ನತೀಕರಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳ ಸೇವಾವಹಿಗಳನ್ನು ಮತ್ತು ಇನ್ನಿತರೇ ವಿವರಗಳನ್ನು ಗಣಕೀಕರಣಗೊಳಿಸಿ, ಹೆಚ್.ಆರ್.ಎಂ.ಎಸ್. ತಂತ್ರಾಂಶವನ್ನು ಉನ್ನತೀಕರಿಸಲು ಉದ್ದೇಶಿಸಲಾಗಿದ್ದು, ಸದರಿ ಕಾರ್ಯವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೇಂದ್ರ ಕಛೇರಿ ಆವರಣದಲ್ಲಿ ದಿ: 08-09-2017 ರಿಂದ ಪ್ರಾರಂಭಿಸಲಾಗಿರುತ್ತದೆ. ಸದರಿ ಕಾರ್ಯಕ್ಕೆ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ತಮ್ಮ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳು ಸೇವಾವಹಿಗಳನ್ನು ನೀಡದೇ ಇರುವುದರಿಂದ ಸದರಿ ಕಾರ್ಯವು ಬಹಳ ಕುಂಠಿತವಾಗಿರುವುದು ಗಮನಿಸಲಾಗಿರುತ್ತದೆ.

ಆದ್ದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ / ನೌಕರರುಗಳ ಸೇವಾವಹಿಗಳನ್ನು ಮತ್ತು ಇನ್ನಿತರೇ ವಿವರಗಳನ್ನು ಗಣಕೀಕರಣಗೊಳಿಸಿ, ಹೆಚ್.ಆರ್.ಎಂ.ಎಸ್. ತಂತ್ರಾಂಶವನ್ನು ಉನ್ನತೀಕರಿಸಲು ಕಾರ್ಯಕ್ಕೆ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಸಹಕರಿಸಿ, ದಿನಾಂಕ: 20-10-2017 ರೊಳಗೆ ಮುಕ್ತಾಯಗೊಳಿಸಲು ಸೂಚಿಸಿದೆ. ತಪ್ಪಿದ್ದಲ್ಲಿ ಎಲ್ಲಾ ಅಧಿಕಾರಿ / ನೌಕರರುಗಳ ವೇತನವನ್ನು ತಡೆ ಹಿಡಿಯಲು ಕ್ರಮವಹಿಸಲಾಗುವುದೆಂದು ಸೂಚಿಸಿದೆ.

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

10/10/17

ಪ್ರತಿಯನ್ನು: ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಹಣಕಾಸು/ಆಡಳಿತ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.
: ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಧಿಕಾರಿಯವರಿಗೆ / ಕಛೇರಿ ಪ್ರತಿ